# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| (1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 339 |
| (2) | ಮಾನ್ಯ ಸದಸ್ಯರ ಹೆಸರು | ಶ್ರೀ ಪಿ.ಎಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| (3) | ಉತ್ತರಿಸಬೇಕಾದ ದಿನಾಂಕ | 18.07.2024 |
| (4) | ಉತ್ತರಿಸುವ ಸಚಿವರು | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆ ಜಿಲ್ಲಾ ಮತ್ತು ಸೇಷನ್ಸ್ ಕೋರ್ಟಿನಲ್ಲಿ ಸುಮಾರು 10,000 (ಹತ್ತು ಸಾವಿರ) ಕ್ಕಿಂತ ಹೆಚ್ಚು ಪ್ರಕರಣಗಳು ಕಳೆದ 8-9 ವರ್ಷಗಳಿಂದ ಇತ್ಯರ್ಥಕ್ಕಾಗಿ ಬಾಕಿ ಉಳಿದುಕೊಂಡ ಕಾರಣ ಸಂಬಂಧಿಸಿದ ಕಕ್ಷಿದಾರರು ತೀವ್ರವಾದ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ |
| ಆ) | ಬಂದಿದ್ದಲ್ಲಿ, ವ್ಯಾಜ್ಯಗಳ ತೀವ್ರ ಇತ್ಯರ್ಥ ಕುರಿತಂತೆ ಕರ್ನಾಟಕ ಉಚ್ಚನ್ಯಾಯಾಲಯದ ರೂಢಿ/ನಿಯಮಾವಳಿಗಳಂತೆ ಜಿಲ್ಲಾ ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ (ಪೆಂಡಿಂಗ್) ಉಳಿದುಕೊಂಡ ಪ್ರತಿ 2,000 ವ್ಯಾಜ್ಯಗಳಿಗೆ ಒಂದು ಹೆಚ್ಚುವರಿ ಜಿಲ್ಲಾ ನ್ಯಾಯಾಲಯದ ಅವಶ್ಯಕತೆ ಇದೆ ಎಂದು ಪರಿಗಣಿಸಿ ಮತ್ತು ಅನುಪಾತದನ್ವಯ ಹೆಚ್ಚುವರಿ ನ್ಯಾಯಾಲಯಗಳನ್ನು ಸ್ಥಾಪನೆ ಮಾಡಬೇಕೆನ್ನುವ ನಿಯಮದ ಕುರಿತಂತೆ ಸರ್ಕಾರಕ್ಕೆ ಮಾಹಿತಿ ಇದೆಯೇ: | ಇದೆ |
| ಇ) | ಹಾಗಿದ್ದಲ್ಲಿ, ಬಾಗಲಕೋಟೆಯ ಜಿಲ್ಲಾ ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಆಧರಿಸಿ ಇನ್ನೂ 7 ಹೆಚ್ಚುವರಿ ನ್ಯಾಯಲಯಗಳ ಸ್ಥಾಪನೆ ಮಾಡಲು ಕ್ರಮ ಕೈಕೊಳ್ಳುವಂತೆಕೋರಿ ಕರ್ನಾಟಕ ಉಚ್ಚ ನ್ಯಾಯಲಯವು ಕೂಡ ದಿನಾಂಕ:15.06.2023 ರಂದು ಸರ್ಕಾರಕ್ಕೆ ಪತ್ರ ಬರೆದಿರುವುದು ನಿಜವೇ; | ನಿಜ |



File No. LAW-LCE/81/2025-ASA1-LAW SEC (Computer No. 1713816)
Generated from eOffice by MUNIRATHNAMMA N, LAW-ADM1-SO(MUNI), SECTION OFFICER, LAW DEPARTMENT SEC on 11/06/2025 04:31 PM

| | | |
|---|---|---|
| ಈ | ಬಾಗಲಕೋಟೆಗೆ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಸ್ಥಾಪನೆ ಮಾಡಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಸ್ಥಾಪನೆ ಯಾವಾಗ ರಚಿಸಲಾಗುವುದು? (ಸಂಪೂರ್ಣ ವಿವರ ಒದಗಿಸುವುದು) | ಬಾಗಲಕೋಟೆ ಜಿಲ್ಲೆಯಲ್ಲಿ ಇನ್ನೂ 7 ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಗಳನ್ನು ಸ್ಥಾಪಿಸಲು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ:15.06.2023 ರಂದು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಈ ಕುರಿತು ಕಡತ ಸಂಖ್ಯೆ: ಲಾ-ಎಲ್‌ಸಿಇ/138/2023ರಲ್ಲಿ ಸರ್ಕಾರದ ಹಂತದಲ್ಲಿ ಪರಿಶೀಲಿಸಿದ್ದು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಿವಿಧ ಶ್ರೇಣಿಯ ನ್ಯಾಯಾಲಯಗಳನ್ನು ಪೂರಕ ಹುದ್ದೆಗಳೊಂದಿಗೆ ಸ್ಥಾಪಿಸಲು ಮಂಜೂರಾತಿ ನೀಡುವಂತೆ ಕೋರಿರುವ ಪ್ರಸ್ತಾವನೆಯನ್ನು ಪರಿಶೀಲಿಸಲು ಕೆಲವೊಂದು ಅಂಶಗಳಿಗೆ ಮಾಹಿತಿ ಹಾಗೂ ಸೂಕ್ತ ಸಮರ್ಥನೆಯೊಂದಿಗೆ ಪ್ರಸ್ತಾವನೆಗಳನ್ನು ಪ್ರತ್ಯೇಕವಾಗಿ ಸಲ್ಲಿಸದೇ ಕ್ರೋಢೀಕರಿಸಿ ಸಮಗ್ರ ಪ್ರಸ್ತಾವನೆಯನ್ನು ಸಲ್ಲಿಸುವಂತೆ ದಿನಾಂಕ:10.08.2023 ರಂದು ಆರ್ಥಿಕ ಇಲಾಖೆಯು ಕೋರಿರುವ ಮೇರೆಗೆ, ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಇವರಿಂದ ದಿನಾಂಕ:25.09.2023 ರ ಪತ್ರದಲ್ಲಿ ಕ್ರೋಢೀಕೃತ ಮಾಹಿತಿಯನ್ನು ಮಾಹಿತಿಯನ್ನು ಪಡೆಯಲಾಗಿರುತ್ತದೆ. ಪ್ರಸ್ತುತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಲಾ-ಎಲ್‌ಸಿಇ/140/2024**

(ಎಚ್.ಕೆ.ಪಾಟೀಲ)
**ಕಾನೂನು, ನ್ಯಾಯ, ಮಾನವ ಹಕ್ಕುಗಳು ,**
**ಸಂಸದೀಯ ವ್ಯವಹಾರಗಳು, ಶಾಸನ**
**ರಚನೆ ಹಾಗೂ ಪ್ರವಾಸೋದ್ಯಮ**
**ಸಚಿವರು**



File No. LAW-LCE/81/2025-ASA1-LAW SEC (Computer No. 1713816)
Generated from eOffice by MUNIRATHNAMMA N, LAW-ADM1-SO(MUNI), SECTION OFFICER, LAW DEPARTMENT SEC on 11/06/2025 04:31 PM